# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1123** |
| ಮಾನ್ಯ ಸದಸ್ಯರ ಹೆಸರು | ಶ್ರೀ ರವಿಕುಮಾರ್ ಎನ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 6 ತಿಂಗಳಿನಿಂದ ಹಿಂದುಳಿದ ವರ್ಗಗಳ ಇಲಾಖೆಯಡಿಯಲ್ಲಿ ಬರುವ ವಿವಿಧ ನಿಗಮಗಳಿಂದ ವಿವಿಧ ಕಲ್ಯಾಣ ಕಾರ್ಯಕ್ರಮದಡಿ ಎಷ್ಟು ಜನರಿಗೆ ಸಹಾಯಧನ/ಸಬ್ಸಿಡಿವಾರು/ವಾಣಿಜ್ಯ ಮತ್ತು ಕೈಗಾರಿಕೆ ಚಟುವಟಿಕೆಗಳಿಗೆ ಸಹಾಯಧನ ಮಂಜೂರು ಮಾಡಲಾಗಿದೆ; ನಿಗಮವಾರು/ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು; | ರಾಜ್ಯದಲ್ಲಿ ಕಳೆದ 06 ತಿಂಗಳಿನಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ವಿವಿಧ ನಿಗಮಗಳಿಂದ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಆ) | ಪ್ರಸಕ್ತ ಸಾಲಿನಲ್ಲಿ ಹಿಂದುಳಿದ ವರ್ಗದ ಇಲಾಖೆಯಲ್ಲಿ ಎಷ್ಟು ಅನುದಾನವನ್ನು ಮೀಸಲು ಇಡಲಾಗಿದೆ; ಯಾವ ಯಾವ ಕಲ್ಯಾಣ ಕಾರ್ಯಕ್ರಮದಡಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ; ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು; | ಪ್ರಸಕ್ತ ಸಾಲಿನಲ್ಲಿ ಹಿಂದುಳಿದ ವರ್ಗದ ಇಲಾಖೆಯ ವ್ಯಾಪ್ತಿಯಡಿ ಬರುವ ವಿವಿಧ ನಿಗಮಗಳಿಂದ ವಿವಿಧ ಕಾರ್ಯಕ್ರಮಗಳಿಗೆ ಮೀಸಲಿಟ್ಟಿರುವ ಹಾಗೂ ಬಳಕೆ ಮಾಡಿರುವ ಅನುದಾನದ ಜಿಲ್ಲಾವಾರು/ ತಾಲ್ಲೂಕುವಾರು ವಿವರಗಳನ್ನು ಇಲಾಖಾ ಜಾಲತಾಣ https://bcw.karnataka.gov.in ರಲ್ಲಿ ಒದಗಿಸಿದೆ. |
| ಇ) | ಕಳೆದ 6 ತಿಂಗಳಿನಿಂದ ವಿದೇಶಿ ವಿಶ್ವವಿದ್ಯಾಲಯಗಳಿಗೆ ಉನ್ನತ ವ್ಯಾಸಂಗಕ್ಕಾಗಿ ಸಹಾಯಧನಕ್ಕಾಗಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ; ಎಷ್ಟು ಸಹಾಯಧನ ಡಿಬಿಟಿ ಮೂಲಕ ವಿತರಿಸಲಾಗಿದೆ; ಬಾಕಿ ಇರುವ ಅರ್ಜಿಗಳು ಎಷ್ಟು; ಯಾವ ಕಾಲಮಿತಿಯೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು? (ವಿವರ ನೀಡುವುದು) | ಕಳೆದ 6 ತಿಂಗಳಿನಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ವಿವಿಧ ನಿಗಮಗಳ ವತಿಯಿಂದ ವಿದೇಶಿ ವಿಶ್ವವಿದ್ಯಾಲಯಗಳಿಗೆ ಉನ್ನತ ವ್ಯಾಸಂಗಕ್ಕಾಗಿ ಸಹಾಯಧನ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.<br><br>ನಿಗಮಗಳಿಂದ 2023-24ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಆರ್ಥಿಕ ನೆರವು ಒದಗಿಸುವ ಸಾಲ ಯೋಜನೆಯಲ್ಲಿ ವಿದ್ಯಾರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆಯ್ಕೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಮುಗಿದ ನಂತರ ಫಲಾನುಭವಿಗಳ ಖಾತೆಗೆ ನೇರವಾಗಿ ಡಿಬಿಟಿ ಮೂಲಕ ಸಹಾಯಧನವನ್ನು ಬಿಡುಗಡೆ ಮಾಡಲಾಗುವುದು. |

**ಸಂಖ್ಯೆ: ಹಿಂವಕ 658 ಬಿಎಂಎಸ್ 2023**

**(ಶಿವರಾಜ್ ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

## ಅನುಬಂಧ

## 2023-24ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಿಗೆ ಉನ್ನತ ವ್ಯಾಸಂಗಕ್ಕೆ ಸಲ್ಲಿಕೆಯಾಗಿರುವ ಅರ್ಜಿಗಳ ವಿವರ

| ಕ್ರ. ಸಂ | ನಿಗಮದ ಹೆಸರು | ಸಲ್ಲಿಕೆಯಾಗಿರುವ ಅರ್ಜಿಗಳು |
|---|---|---|
| 1. | ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ | 30 |
| 2. | ಕರ್ನಾಟಕ ಒಕ್ಕಲಿಗ ಅಭಿವೃದ್ಧಿ ನಿಗಮ | 39 |
| 3. | ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ | 02 |
| 4. | ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ | 01 |
| 5. | ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ | 04 |
| 6. | ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ | 02 |
| 7. | ಕರ್ನಾಟಕ ಅಲೆಮಾರಿ ಅರೆ ಅಲೆಮಾರಿ ಅಭಿವೃದ್ಧಿ ನಿಗಮ | 02 |
| 8. | ಕರ್ನಾಟಕ ಸವಿತ ಸಮಾಜ ಅಭಿವೃದ್ಧಿ ನಿಗಮ | ಯಾವುದೇ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ |
| 9. | ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ | 01 |

**(ಕೆ. ಅಶ್ವತ್ಥ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ